ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 6/2/2021

## ಪಾದಯಾತ್ರೆಯಲ್ಲಿ ನಿರೀಕ್ಷೆಗೂ ಮೀರಿ ಜನ ಬೆಂಬಲ: ನಿರಂಜನಾನಂದಪುರಿ ಸ್ವಾಮೀಜಿ

# ಎಸ್ಟಿ ಮೀಸಲಿಗಾಗಿ ಉಭಯ ಸರ್ಕಾರಕ್ಕೆ ಹಕ್ಕೊತ್ತಾಯ



ಕಾಗಿನೆಲೆ ಕನಕಗುರು ಪೀಠದ ನಿರಂಜನಾನಂದಪುರಿ ಸ್ವಾಮೀಜಿ ಮಾತನಾಡಿದರು.

ಬೆಂಗಳೂರು: ಫೆ. 7ರಂದು ಕುರುಬರ ಎಸ್ಟಿ ಮೀಸಲಾತಿ ಹೋರಾಟದ ಬೃಹತ್ ಸಮಾವೇಶ ನಡೆಸಲಾಗುತ್ತಿದ್ದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಹಕ್ಕೊತ್ತಾಯ ಮಾಡಲಾಗುವುದು ಎಂದು ಕಾಗಿನೆಲೆ ಕನಕಗುರು ಪೀಠದ ಪೀಠಾಧ್ಯಕ್ಷರಾದ ನಿರಂಜನಾನಂದಪುರಿ ಸ್ವಾಮೀಜಿ ಹೇಳಿದ್ದಾರೆ.

ಕುರುಬ ಸಮಾಜದ ಮುಖಂಡರೊಂದಿಗೆ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕುರುಬ ಸಮುದಾಯಕ್ಕೆ ಎಸ್ಟಿ ಸಮುದಾಯದ ಮೀಸಲಾತಿಗಾಗಿ ಕಾಗಿನೆಲೆಯಿಂದ ಬೆಂಗಳೂರುವರೆಗೂ 21 ದಿನ ಪಾದಯಾತ್ರೆ ನಡೆಸಲಾಗಿದೆ. ನಮ್ಮ ನಿರೀಕ್ಷೆ ಮೀರಿ ತಾಲೂಕು ಜಿಲ್ಲಾ, ಕೇಂದ್ರಗಳಲ್ಲಿ ಜನ ಬೆಂಬಲ ನೀಡಿದ್ದಾರೆ. ಪ್ರತಿ ದಿನ 20 ರಿಂದ 30 ಸಾವಿರ ಜನರು ಪಾದಯಾತ್ರೆಯಲ್ಲಿ ಪಾಲ್ಗೊಳ್ಳುತ್ತಿದ್ದರು ಎಂದರು.

ವಿಶೇಷವಾಗಿ ಬೇರೆ ಸಮುದಾಯಗಳ ಸ್ವಾಮೀಜಿಗಳು ಪಾದಯಾತ್ರೆಗೆ ಬೆಂಬಲ ಸೂಚಿಸಿದ್ದರು. ಪಾದಯಾತ್ರೆಗೆ ಧರ್ಮಾತೀತವಾಗಿ ಬೆಂಬಲ ಕೊಟ್ಟಿದ್ದಾರೆ. ಹಾಲುಮತ ಸಮುದಾಯ ಜಾತ್ಯತೀತವಾಗಿದೆ ಎನ್ನುವುದಕ್ಕೆ ಇದು ಸಾಕ್ಷಿ. ತುಮಕೂರಿನಲ್ಲಿ ವೀರಶೈವ ಸಮುದಾಯ ಮಠದವರು, ಮುಸ್ಲಿಂ ಸಮುದಾಯದವರು ಆಶ್ರಯ ನೀಡಿದ್ದರು. 21 ದಿನದ ಪಾದಯಾತ್ರೆ ಯಶಸ್ವಿಯಾಗಿ ಪೂರ್ಣಗೊಂಡಿದೆ. ಬೆಂಗಳೂರಿನಲ್ಲಿ ನಡೆಯಲಿರುವ ಸಮಾವೇಶದ ಮೂಲಕ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ಹಕ್ಕೊತ್ತಾಯ ಮಾಡಲಾಗುವುದು ಎಂದು ಹೇಳಿದರು.

ನಮ್ಮ ಹೋರಾಟವನ್ನು ಸರ್ಕಾರ ನಿರ್ಲಕ್ಷ್ಯ ಮಾಡಿದೆ ಎಂಬ ಭಾವನೆ ನಮಗಿಲ್ಲ, ರಾಜ್ಯ ಸರ್ಕಾರದ ಪರವಾಗಿ ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರು ನಿರಂತರ ಸಂಪರ್ಕದಲ್ಲಿದ್ದರು. ಪಾದಯಾತ್ರೆ ಮುಗಿಸಿಕೊಂಡು ಬನ್ನಿ ಚರ್ಚಿಸಿ ತೀರ್ಮಾನಿಸೋಣ ಎಂದು ಹೇಳಿದ್ದಾರೆ ಎಂದು ಸ್ವಾಮೀಜಿ ತಿಳಿಸಿದರು.

ನಾವು ಆರಂಭದಲ್ಲಿಯೇ ಸಿದ್ದರಾಮಯ್ಯ ಅವರನ್ನು ಕರೆದಿದ್ದೇವೆ. ಎಲ್ಲರೂ ಸ್ವಯಂಪ್ರೇರಿತರಾಗಿ ಪಾಲ್ಗೊಳ್ಳುತ್ತಿದ್ದಾರೆ. ಸಿದ್ದರಾಮಯ್ಯ ಬರುವ ನಿರೀಕ್ಷೆ ಇದೆ. ಈ ಹೋರಾಟದ ಹಿಂದೆ ಆರ್‌ಎಸ್‌ಎಸ್ ಕೈವಾಡ ಇಲ್ಲ.

• **ಈಶ್ವರಾನಂದಪುರಿ**, ಪೀಠಾಧ್ಯಕ್ಷರು, ಹೊಸದುರ್ಗ ಶಾಖಾ ಮಠ.

ಇದು ಯಾವುದೇ ರಾಜಕೀಯ ಪಕ್ಷದ ಅಜೆಂಡಾ ಅಲ್ಲ. ಇಡೀ ಸಮುದಾಯದ ಅಜೆಂಡಾ. ಅದನ್ನು ಸರ್ಕಾರಕ್ಕೆ ಮುಟ್ಟಿಸಲು ಸ್ವಾಮೀಜಿಗಳು, ಜನ ಪ್ರತಿನಿಧಿಗಳು ಕೆಲಸ ಮಾಡುತ್ತಿದ್ದೇವೆ.

• **ಎಚ್. ವಿಶ್ವನಾಥ್**, ವಿಧಾನ ಪರಿಷತ್ ಸದಸ್ಯ.

ಸ್ವಾತಂತ್ರ್ಯಾನಂತರ ಬಂದ ಸರ್ಕಾರಗಳು ಮೀಸಲಾತಿ ನೀಡಬೇಕಿತ್ತು. ಆದರೆ, ಅಧಿಕಾರ ನಡೆಸಿದ ಸರ್ಕಾರಗಳು ನಿರ್ಲಕ್ಷ್ಯ ಮಾಡಿದ್ದರಿಂದ ಬೀದಿಗಿಳಿದು ಹೋರಾಟ ಮಾಡಬೇಕಾಗಿದೆ.

• **ವಿರುಪಾಕ್ಷಪ್ಪ**
ಕುರುಬ ಎಸ್ಟಿ ಹೋರಾಟ ಸಮಿತಿ ಅಧ್ಯಕ್ಷ.

25 ವರ್ಷಗಳಿಂದ ಈ ಹೋರಾಟ ನಡೆಯುತ್ತಿದೆ. 2 ಎಯಲ್ಲಿ ಕುರುಬರಿಗೆ ಇರುವ ಶೇ.7 ರಷ್ಟು ಮೀಸಲಾತಿಯನ್ನು ತೆಗೆದುಕೊಂಡು ಎಸ್ಟಿಗೆ ಹೋಗಲು ಅವಕಾಶ ಇದೆ. ರಾಜಕೀಯ ಇಚ್ಛಾಶಕ್ತಿ ಬೇಕು.

• **ಎಚ್.ಎಂ.ರೇವಣ್ಣ**, ಮಾಜಿ ಸಚಿವ.

# ಮೀಸಲಾತಿ ನೀಡಲು ಮುಖ್ಯಮಂತ್ರಿಗಳಿಂದ ಸಾಧ್ಯವಿಲ್ಲ



ನೆಲಮಂಗಲ: ಕುರುಬ ಸಮುದಾಯ ಸೇರಿ ರಾಜ್ಯದ ಯಾವುದೇ ಸಮುದಾಯಕ್ಕೆ ಮೀಸಲಾತಿ ನೀಡಲು ಮುಖ್ಯಮಂತ್ರಿಗಳಿಂದ ಸಾಧ್ಯವಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್. ಈಶ್ವರಪ್ಪ ಸ್ಪಷ್ಟಪಡಿಸಿದರು.

ಬೆಂಗಳೂರು ಉತ್ತರ ತಾಲೂಕಿನ ಮಾದಾವರದ ಬಿಐಇಸಿಯಲ್ಲಿ ಫೆ. 7ರಂದು ನಡೆಯಲಿರುವ ಬೃಹತ್ ಸಮಾವೇಶದ ಸ್ಥಳ ಪರಿಶೀಲನೆ ಮಾಡಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಏಕಾಏಕಿ ಎಸ್‌ಟಿ ಮೀಸಲಾತಿ ನೀಡುವುದಾಗಿ ಘೋಷಣೆ ಮಾಡಲು ಬರುವುದಿಲ್ಲ, ಕುಲಶಾಸ್ತ್ರ, ಜನಜಾಗೃತಿ ಜತೆ ದಾಖಲೆ ನೀಡುವ ಮೂಲಕ ವ್ಯವಸ್ಥಿತವಾಗಿ ಸಂವಿಧಾನ ಬದ್ಧವಾಗಿ ಎಸ್‌ಟಿ ಮೀಸಲಾತಿ ಪಡೆಯಬೇಕು. ಕೇಂದ್ರಕ್ಕೆ ಮನವಿ ಮಾಡಿ ಸಂಸತ್ತಿನ ಗಮನಕ್ಕೆ ತರುತ್ತೇವೆ ಎಂದರು.

ಹಿಂದೂ ಸಮಾಜದಲ್ಲಿ ಕುರುಬರಿಗೆ ಎಸ್‌ಟಿ ಮೀಸಲು ಸಿಕ್ಕರೆ ನ್ಯಾಯಸಿಗಲಿದ್ದು ಸ್ವಾಮೀಜಿಯವರಿಂದ ಆರಂಭವಾಗಿರುವ ಹೋರಾಟ ನ್ಯಾಯ ಸಿಗುವವರೆಗೂ ನಿಲ್ಲುವುದಿಲ್ಲ ಎಂದು ಸಚಿವ ಈಶ್ವರಪ್ಪ ಹೇಳಿದರು.